# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:-** ಶ್ರೀ ಬಸವರಾಜ್ ಸಂಕನಾಳ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಳಗೇರಾ ಗ್ರಾಮ ಪಂಚಾಯಿತಿ, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ, ಶ್ರೀ ಮಲ್ಲಿಕಾರ್ಜುನ, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಪತ್ರ, ಅಸಪ ಸಂಖ್ಯೆ: ಕಂಪ್ಲೇಂಟ್/ಉಪಲೋಕ್/ಜಿಎಲ್‌ಬಿ-8727/2015/ಎಆರ್‌ಇ-3 ದಿನಾಂಕ:05-11-2016

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು, ಇವರು ದಿನಾಂಕ:03-11-2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಬಸವರಾಜ್ ಸಂಕನಾಳ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಳಗೇರಾ ಗ್ರಾಮ ಪಂಚಾಯಿತಿ, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ, ಶ್ರೀ ಮಲ್ಲಿಕಾರ್ಜುನ, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ, ಇವರು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತರಿ ಯೋಜನೆಯಡಿ ಕಲಬಂಡಿ ಕೆರೆಯ ಹೂಳು ತೆಗೆಯುವ ಕಾಮಗಾರಿಗೆ ಸಂಬಂಧಿಸಿದಂತೆ ದಾಖಲೆಗಳಾದ ನಮೂನೆ 6 ಮತ್ತು 9 ರಲ್ಲಿ 100 ಜನ ಕೂಲಿಕಾರರು ಕೆಲಸ ನಿರ್ವಹಿಸಿದ್ದು, ಆದರೆ 500 ಜನ ಕೂಲಿಕಾರರು ಕೆಲಸ ನಿರ್ವಹಿಸಿರುತ್ತಾರೆಂದು ತೋರಿಸಿ ತಮಗೆ ಬೇಕಾದವರ ಬಳಿ ಸಹಿ ಪಡೆದಿರುತ್ತಾರೆ. ಕೂಲಿಕಾರರಿಗೆ ಕೂಲಿಯ ಹಣವನ್ನು ಪಾವತಿಸಿರುವುದಿಲ್ಲ, 30 ಟ್ರಕ್ ಲೋಡ್ ಹೋಳನ್ನು ತೆಗೆಯಲು 30.00 ಲಕ್ಷ ರೂ ವೆಚ್ಚವನ್ನು ತೋರಿಸಲಾಗಿರುತ್ತದೆ. ಕೆಲಸಕ್ಕೆ ಗೈರುಹಾಜರಾಗಿರುವ ಕೂಲಿಕಾರರಿಗೆ ಕೂಲಿಹಣ ಪಾವತಿಸಲಾಗಿರುತ್ತದೆ. ಈ ಬಗ್ಗೆ ದೂರು ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ ಎಂದು ದೂರುದಾರರಾದ ಶ್ರೀ ಗವಿಸಿದದಪ್ಪ ತಂದೆ ವೀರಭದ್ರಪ್ಪ ಬಳಿಗಾರ, ಚಳಗೇರಾ, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ, ಇವರು ಸಲ್ಲಿಸಿದ ದೂರಿನಂತೆ ನಡೆಸಿದ ತನಿಖೆ ಅನುಸಾರ

> "ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತರಿ ಯೋಜನೆಯಡಿಯ ಕಾಮಗಾರಿಯಲ್ಲಿ ಕೂಲಿಕಾರರಾಗಿ ಕೆಲಸ ನಿರ್ವಹಿಸಿರುತ್ತಾರೆಂದು ಹಾಜರಾತಿ ಪಟ್ಟಿಯಲ್ಲಿ ಮೃತ ವ್ಯಕಿಗಳ ಹೆಸರನ್ನು ನಮೂದಿಸಲಾಗಿರುತ್ತದೆ, ಅಂಗನವಾಡಿ ಕಾರ್ಯಕರ್ತರ ಹೆಸರನ್ನು ನಮೂದಿಸಲಾಗಿರುತ್ತದೆ. ಕಲಬಂಡಿ ಕೆರೆಯ ಹೂಳು ತೆಗೆಯುವ ಕಾಮಗಾರಿಗೆ ಸಂಬಂಧಿಸಿದಂತೆ ಟ್ರಾಕ್ಟರ್ ಮುಖಾಂತರ ಮಣ್ಣು ಸಾಗಣೆ ಮಾಡಿರುವುದಾಗಿ ತೋರಿಸಲಾಗಿದ್ದು, ಈ ಸಂಬಂಧ ಕಾಮಗಾರಿಯ ವಿವರ ನೋಡಲು ಅಳತೆ ಪುಸ್ತಕ ಒದಗಿಸಿರುವುದಿಲ್ಲ. ಕೆಲವು ಕೂಲಿಕಾರರು ತಮ್ಮ ಹಣವನ್ನು ಕರ್ನಾಟಕ ಪ್ರಾಂತ ರೈತ ಸಂಘದ ಸದಸ್ಯತ್ವಕ್ಕಾಗಿ ಪಾವತಿಸಿರುತ್ತಾರೆ"

ಶ್ರೀ ಬಸವರಾಜ್ ಸಂಕನಾಳ, ಶ್ರೀ ಮಲ್ಲಿಕಾರ್ಜುನ, ಇವರುಗಳು ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣಾ ಉದ್ಯೋಗ ಖಾತರಿ ಯೋಜನೆಯಡಿ ಕೂಲಿಕಾರರಿಗೆ ಹಣಪಾವತಿಸುವಲ್ಲಿ ಮತ್ತು ಹಾಜರಾತಿ ಪುಸ್ತಕವನ್ನು ನಿರ್ವಹಿಸುವಲ್ಲಿ ಮಾರ್ಗಸೂಚಿಗಳನ್ನು ಉಲ್ಲಂಘಿಸಿ ಇವರು ತಮ್ಮ ಕರ್ತವ್ಯ ಪಾಲನೆಯಲ್ಲಿ ಸಂಪೂರ್ಣ ಪ್ರಾಮಾಣಿಕತೆ ಹಾಗೂ ನಿಷ್ಠೆ ತೋರದೆ ಮತ್ತು ಸರ್ಕಾರಿ ನೌಕರರಿಗೆ ಉಚಿತವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ನಡತೆ/ದುರ್ವತನೆಯಿಂದ ವರ್ತಿಸಿ, ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಾಮಗಳು 1996 ರ ನಿಯಮ 3(i) ರಿಂದ (iii) ರಡಿ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ ಶ್ರೀ ಬಸವರಾಜ್ ಸಂಕನಾಳ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶ್ರೀ ಮಲ್ಲಿಕಾರ್ಜುನ, ಕಿರಿಯ ಇಂಜಿನಿಯರ್, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/792/ಗ್ರಾಪಂಕಾ/2016 ಬೆಂಗಳೂರು, ದಿನಾಂಕ:-04-01-2017.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಬಸವರಾಜ್ ಸಂಕನಾಳ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಳಗೇರಾ ಗ್ರಾಮ ಪಂಚಾಯಿತಿ, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ, ಶ್ರೀ ಮಲ್ಲಿಕಾರ್ಜುನ, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಪ್ಪಳ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ.
6. ಅಧೀನ ಕಾರ್ಯದರ್ಶಿ, ಸೇವೆಗಳು-ಬಿ ಮತ್ತು ಸಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7. ಶ್ರೀ ಬಸವರಾಜ್ ಸಂಕನಾಳ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಳಗೇರಾ ಗ್ರಾಮ ಪಂಚಾಯಿತಿ, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ,
8. ಶ್ರೀ ಮಲ್ಲಿಕಾರ್ಜುನ, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್, ಕುಷ್ಟಗಿ ತಾಲ್ಲೂಕು, ಕೊಪ್ಪಳ ಜಿಲ್ಲೆ,
9. ಕಂಪ್ಯೂಟರ್ ಸೆಲ್, ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.